**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 54/2022**

**ಸಾಕ್ಷಿಗೆ ದಿನಾಂಕ 24.3.2025 ರಂದು ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ವೆಂಕಟೇಶ | ಪಿ.ಡಬ್ಲ್ಯೂ-6 |
| ತಂದೆಯ/ಗಂಡನ ಹೆಸರು | : | ಸೋಮನಾಯಕ | ಸಿ.ಡಬ್ಲ್ಯೂ-14 |
| ವಯಸ್ಸು | : | 27 | |
| ಉದ್ಯೋಗ | : | ಚಾಲಕ | |
| ವಾಸಸ್ಥಳ | : | ಹೆಚ್.ಡಿ.ಕೋಟೆ | |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನ್ಯಾಯಾಲಯದ ಮುಂದಿರುವ 2 ನೇ ಆರೋಪಿಯನ್ನು ನೋಡಿರುವುದಿಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಅದನ್ನು 4 ವರ್ಷದ ಹಿಂದೆ ಹೆಚ್.ಡಿ.ಕೋಟೆ ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಸ್ಥಳದ ಪಂಚನಾಮೆಯನ್ನು ಮಾಡಿರುವುದಿಲ್ಲ. ಸಾಕ್ಷಿದಾರರು ದಾಖಲೆಯಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಆರೋಪಿ ತೋರಿಸಿದ ಸ್ಥಳ ಮಹಜರ್ ಆಗಿದ್ದು ಅದನ್ನು ನಿಪಿ16 ಎಂದು, ಸಾಕ್ಷಿ ಸಹಿಯನ್ನು ನಿಪಿ16 ಎ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)

**ಪಾಟೀಸವಾಲುಃ ಎಪಿಪಿ ರವರಿಂದಃ**

ದಿನಾಂಕ 13.12.2021 ರಂದು ಹೆಚ್.ಡಿ.ಕೋಟೆ ಪೋಲಿಸರು ನ್ಯಾಯಾಲಯದ ಮುಂದಿರುವ 2 ನೇ ಆರೋಪಿಯ ಜೊತೆ ನನ್ನನ್ನು ಹಾಗೂ ಚಾಸ 15 ರವರನ್ನು ಮೈಸೂರು-ಮಾನಂದವಾಡಿ ರಸ್ತೆಯ ಹ್ಯಾಂಡಪೋಸ್ಟಿನ ಭಾರತ್ ಪೆಟ್ರೋಲ್ ಬಂಕ್ ಹತ್ತಿರ ಅಪಘಾತದ ವಿಚಾರವಾಗಿ ಕರೆದುಕೊಂಡು ಹೋಗಿದ್ದು 2 ನೇ ಆರೋಪಿ ತೋರಿಸಿದ ಅಪಘಾತ ಸ್ಥಳವನ್ನು ನನ್ನ ಹಾಗೂ ಇನ್ನೊಬ್ಬ

ಪಂಚರ ಸಮಕ್ಷಮ ಪರಿಶೀಲಿಸಿ ಸ್ಥಳದಲ್ಲಿ ಮದ್ಯಾಹ್ನ 2 ರಿಂದ 3 ಗಂಟೆವರೆಗೆ ನಿಪಿ16 ರಂತೆ ಪಂಚನಾಮೆಯನ್ನು ಮಾಡಿ ಸ್ಥಳದಲ್ಲಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸದರಿ ಸ್ಥಳದಲ್ಲಿ ಹಾಜರಿದ್ದು ಮಹಜರಿಗೆ ಸಹಿ ಮಾಡಿದ್ದರೂ ಸಹ 2 ನೇ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿತರ ಪರ ವಕೀಲರಿಂದಃ ಏನೂ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ